# ಸರ್ಕಾರಿ ಪ್ರೌಢಶಾಲೆ, ಕುರುವಂಕ. ಅರಸೀಕೆರೆ ತಾ. ಹಾಸನ ಜಿಲ್ಲೆ.

## ಎಸ್. ಎಸ್. ಎಲ್. ಸಿ. ಅರ್ಧ ವಾರ್ಷಿಕ ಪರೀಕ್ಷೆ – ಸೆಪ್ಟಂಬರ್ 2019

ಸಮಯ: 3 ಗಂಟೆ **ಪ್ರಥಮ ಭಾಷೆ ಕನ್ನಡ (01 K)** ಅಂಕಗಳು : 100

**ಈ ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ಕೊಡಲಾಗಿದೆ. ಅವುಗಳಲ್ಲಿ ಹೆಚ್ಚು ಸೂಕ್ತವಾದ ಉತ್ತರವನ್ನು ಆರಿಸಿ, ಕ್ರಮಾಕ್ಷರದೊಂದಿಗೆ ಬರೆಯಿರಿ.** **6 × 1 = 6**

1. ಈ ಕೆಳಗಿನವುಗಳಲ್ಲಿ ಅನುನಾಸಿಕ ಅಕ್ಷರಗಳ ಗುಂಪು
   ಎ) ಆ ಈ ಊ ಏ ಬಿ) ಕ ಖ ಗ ಘ ಜ ಸಿ) ಯ ರ ಲ ವ ಡಿ) ಜ ಞ ಣ ನ ಮ
2. ರವಿಯು ಮನೆಯಲ್ಲಿ ಊಟಕ್ಕೆ ಬಂದನು– ಈ ವಾಕ್ಯದಲ್ಲಿ ಸಂಪ್ರದಾನ ಕಾರಕ ನಾಮಪದ
   ಎ) ರವಿಯು ಬಿ) ಮನೆಯಲ್ಲಿ ಸಿ) ಊಟಕ್ಕೆ ಡಿ) ಬಂದನು
3. ಅತಿವೃಷ್ಟಿಯು ಬಂದೀತು ಎಂದು ಜನಜಂಗುಳಿ ಭಾವಿಸಲಿ. ಈ ವಾಕ್ಯದಲ್ಲಿರುವ ವಿಧ್ಯರ್ಥಕ ಕ್ರಿಯಾಪದ
   ಎ) ಅತಿವೃಷ್ಟಿಯು ಬಿ) ಬಂದೀತು ಸಿ) ಭಾವಿಸಲಿ ಡಿ) ಜನಜಂಗುಳಿ
4. **<u>ಬೆಳಕಿಗೊಲಿದವರ್</u>** ಉರಿವ ಬತ್ತಿಯ ಕರುಕ ಕಾಣರು– ಗೆರೆ ಎಳೆದ ಪದದಲ್ಲಿರುವ ಸಂಧಿ
   ಎ) ಗುಣಸಂಧಿ ಬಿ) ಆದೇಶಸಂಧಿ ಸಿ) ಆಗಮಸಂಧಿ ಡಿ) ಲೋಪಸಂಧಿ
5. ಗೆಳೆಯಗೆಳತಿಯರು ನಡುರಾತ್ರಿಯಲ್ಲಿ ಅರಮನೆ ನೋಡಲು ಮನಸ್ಸುಮಾಡಿದರು.
   ಈ ವಾಕ್ಯದಲ್ಲಿ ಅಂಶಿಸಮಾಸಕ್ಕೆ ಉದಾಹರಣೆ
   ಎ) ಗೆಳೆಯಗೆಳತಿಯರು ಬಿ) ನಡುರಾತ್ರಿ ಸಿ) ಮನಸ್ಸುಮಾಡು ಡಿ) ಅರಮನೆ
6. ಬಳೆಗಾರನು ಜಾಣ್ಮೆಯಿಂದ ಹಣವಂತರಿಗೆ ಹೆಚ್ಚಿನ ಹಣಕಾಸಿಗೆ ಮಾರಿದು.
   ಈ ವಾಕ್ಯದಲ್ಲಿರುವ ತದ್ಧಿತಾಂತ ಭಾವನಾಮ ಪದ
   ಎ) ಬಳೆಗಾರ ಬಿ) ಜಾಣ್ಮೆ ಸಿ) ಹಣವಂತ ಡಿ) ಹಣಕಾಸು

**ಈ ಕೆಳಗಿನ ಮೊದಲೆರಡು ಪದಗಳಿಗೆ ಇರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿಹೊಂದುವ ಸಂಬಂಧೀ ಪದವನ್ನು ಬರೆಯಿರಿ:** **1 × 4 =4**

7. ಅಬಕಾರಿ : ಫಾರ್ಸಿ : : ಅನಾನಸು : ________
8. ಘೋರ : ಆಪತ್ತು : : ಕೈವಾರ : __________
9. ಶರಚ್ಚಂದ್ರ : ಶ್ಚುತ್ವಸಂಧಿ : : ವಾಙ್ಮಯ : ________
10. ನಮೋ ನಮೋ : ದ್ವಿರುಕ್ತಿ : : ಕೆರೆಕಟ್ಟೆಗಳು : _________

**ಈ ಕೆಳಗಿನ ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ.** **7 × 1 = 7**

11. ರಾಹಿಲನು ತುರ್ತುಪರಿಸ್ಥಿತಿ ನಿರ್ವಹಣೆಗೆ ಭದ್ರವಾಗಿ ಹಿಡಿದುಕೊಂಡಿದ್ದೇನು?
12. ಯುದ್ಧದ ಬಗೆಗೆ ಮುದುಕಿಯ ಅಭಿಪ್ರಾಯವೇನು?
13. ಮತಂಗಾಶ್ರಮದಲ್ಲಿ ವಾಸವಿದ್ದ ತಪಸ್ವಿನಿ ಯಾರು?
14. ಲಂಡನ್ನಿನ ರಸ್ತೆಗಳಲ್ಲಿ ನಿಲ್ಲುವುದನ್ನು ತಪ್ಪಿಸಲು ಮಾಡಿರುವ ವ್ಯವಸ್ಥೆಯೇನು?
15. ಯಾವ ಎಚ್ಚರದೊಳು ಬದುಕಬೇಕಿದೆ?
16. ಕುಮಾರವ್ಯಾಸನ ಆರಾಧ್ಯ ದೈವ ಯಾರು?
17. ಇಳೆಯು ಯಾವ ಸಂಭ್ರಮದಲ್ಲಿದೆ?

**ಈ ಕೆಳಗಿನವುಗಳಿಗೆ ಮೂರು – ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ** **10 × 02 = 20**

18. ಡಾಕ್ಟರ್‌ಗೆ ವಿಮಾನದ ಪೈಲಟ್ ಏನು ಹೇಳಿದನು?
19. ಶಬರಿಯು ರಾಮಲಕ್ಷ್ಮಣರನ್ನು ಉಪಚರಿಸಿದ ರೀತಿಯನ್ನು ವಿವರಿಸಿ.
20. ಸಾಮ್ರಾಟರ ರಾಜ್ಯಾಭಿಷೇಕವಾಗುವ ಸಿಂಹಾಸನದ ಮೇಲಿರುವ ಕಲ್ಲುಪಾಟಿಯ ವಿಶೇಷತೆಯೇನು?
21. ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಯಾವ ನೀರಾವರಿ ಯೋಜನೆಗಳು ಕಾರ್ಯರೂಪಕ್ಕೆ ಬಂದವು?
22. ಹಲಗಲಿಗೆ ದಂಡು ಬರಲು ಕಾರಣವೇನು?
23. ಕುಂತಿ, ಮಾದ್ರಿಯರು ಯಾರ್ಯಾರ ಅನುಗ್ರಹದಿಂದ ಮಕ್ಕಳನ್ನು ಪಡೆದರು?

24. ವಿವೇಕಾನಂದರು ಧಾರ್ಮಿಕ ಮೂಲಭೂತವಾದಕ್ಕೆ ಉಗ್ರ ವಿರೋಧಿಯಾಗಿದ್ದರು. ಹೇಗೆ?
25. ವಿವೇಕಾನಂದರು ಇಂದಿಗೂ ಸತ್ಯ. ಹೇಗೆ?
26. ಭಗತ್‌ಸಿಂಗ್ ಮತ್ತು ಅವನ ಸಹಚರರಿಗೆ ಗಲ್ಲುಶಿಕ್ಷೆಯಾಗಲು ಕಾರಣವೇನು?
27. ಭಗತ್‌ಸಿಂಗ್‌ನ ಸಹೋದರಿಗೆ ಅವನ ಉಪವಾಸಕ್ಕೆ ಕಾರಣ ಹೇಗೆ ತಿಳಿಯಿತು?

**ಈ ಸಾಹಿತಿ/ಕವಿಗಳ ಸ್ಥಳ, ಕಾಲ, ಕೃತಿ, ಪ್ರಶಸ್ತಿ/ಬಿರುದುಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ. 02 × 03 = 06**

28. ಪು. ತಿ. ನರಸಿಂಹಾಚಾರ್
29. ಜಿ.ಎಸ್.ಶಿವರುದ್ರಪ್ಪ

**30. ಈ ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗ ಮಾಡಿ, ಛಂದಸ್ಸಿನ ಹೆಸರನ್ನು ಬರೆಯಿರಿ. 1 × 3 =3**

ತೀರಿಸಿಯೆ ಪತಿಯವಸರಕ್ಕೆ ಶ
ರೀರವನು ನೂಕುವೆನು ನಿನ್ನಯ
ವೀರರ‍್ರೈವರ ನೋಯಿಸೆನು ರಾಜೀವಸಖನಾಣೆ

**31. ಈ ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು ಸಮನ್ವಯಿಸಿ. 1 × 3 =3**

"ಒಳಗಿನ ಮಂದಿ ಗುಂಡು ಹೊಡಿದರೊ ಮುಂಗಾರಿ ಸಿಡಿಲ ಸಿಡಿದ್ಹಾಂಗ"

**32. ಈ ಕೆಳಗೆ ಕೊಟ್ಟಿರುವ ಗಾದೆಗಳಲ್ಲಿ ಯಾವುದಾದರೂ ಒಂದನ್ನು ವಿಸ್ತರಿಸಿ ಬರೆಯಿರಿ. 1 × 3 = 3**

* ಬೆಳ್ಳಗಿರುವುದೆಲ್ಲಾ ಹಾಲಲ್ಲ.

ಅಥವಾ

* ಇರುಳು ಕಂಡ ಬಾವಿಗೆ ಹಗಲು ಬಿದ್ದಂತೆ

**ಈ ಕೆಳಗಿನ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ. 06 × 03 = 18**

33. "ಯುದ್ಧಕ್ಕೆ ಹೋದ ತನ್ನ ಮಗನ ಕಣ್ಣುಗಳಂತೆಯೇ ಇವೆಯಲ್ಲ?"
34. "ಹೊತ್ತು ! ಹೊತ್ತು ! ಹೊತ್ತೇ ಹಣ"
35. "ಆದರ್ಶ ಪುರುಷರೊಬ್ಬರು ದಿವಾನರಾದದ್ದು ಮೈಸೂರು ಸಂಸ್ಥಾನದ ಪುಣ್ಯ ವಿಶೇಷವೇ ಸರಿ."
36. "ಮಂಗಳ ಲೋಕದ ಅಂಗಳಕೇರಿ"
37. "ಎಲ್ಲ ಜನರಿಗೆ ಜೋರ ಮಾಡಿ ಕಸಿದು ಕೊಳ್ಳಿರಿ ಹತಾರ"
38. "ಬಾಯ್ದಂಬುಲಕೆ ಕೈಯಾನುವರೆ"

**ಈ ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿರಿ 1 × 4 = 4**

39. ನೀಲ ಮೇಘ ______________     **ಅಥವಾ**     ಯುಗ–ಯುಗ ______________

______________     ______________
______________     ______________
______________     ______________

ಹಕ್ಕಿ ಹಾರುತಿದೆ ನೋಡಿದಿರಾ?     ಹಕ್ಕಿ ಹಾರುತಿದೆ ನೋಡಿದಿರಾ?

**ಈ ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು, ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ. 1 × 4 = 4**

40. ಕೊಡಲಿ ಕೋರೆ ಕುಡ ಕಬ್ಬಿಣ ಮೊಸರು ಬೆಣ್ಣಿ ಹಾಲಾ
ಉಪ್ಪು ಎಣ್ಣೆ ಅರಿಸಿಣ ಜೀರಗಿ ಅಕ್ಕಿಸಕ್ಕಾರಿ ಬೆಲ್ಲಾ
ಗಂಗಳ ಚೆರಗಿ ಮಂಗಳ ಸೂತ್ರ ಹೋದವು ಬೀಸುಕಲ್ಲಾ
ಹಾಳಾಗಿ ಹೋಯಿತು ಅತ್ತು ವರ್ಣಿಸಿ ಹೇಳಲಿ ನಾನೆಷ್ಟಾ

**ಈ ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ. 2 × 4 = 8**

41. ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಮೈಸೂರು 'ಮಾದರಿ ಮೈಸೂರು ರಾಜ್ಯ' ಹೇಗಾಯಿತು?

**ಅಥವಾ**

ಶಿಕ್ಷಣ ಕ್ಷೇತ್ರಕ್ಕೆ ವಿಶ್ವೇಶ್ವರಯ್ಯ ಅವರು ಸಲ್ಲಿಸಿದ ಕೊಡುಗೆಯನ್ನು ತಿಳಿಸಿ.

42. ನಾವು ಯಾವ ಸಂಕಲ್ಪ ಕೈಗೊಳ್ಳಬೇಕೆಂಬುದು ಕವಿ ಶಿವರುದ್ರಪ್ಪನವರ ಆಶಯ?

**ಅಥವಾ**

ಸಂಕಲ್ಪ ಮತ್ತು ಅನುಷ್ಠಾನದ ಕುರಿತು ಕವಿ ಶಿವರುದ್ರಪ್ಪನವರ ಅಭಿಪ್ರಾಯವನ್ನು ವಿವರಿಸಿ.

**ಈ ಕೆಳಗಿನ ಗದ್ಯಭಾಗವನ್ನು ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ.** **4 = (2+2)**

43. ನಮ್ಮ ಸುತ್ತ ಮುತ್ತ ಇರುವ ಬೆಟ್ಟ–ಗುಡ್ಡಗಳು, ಮರಗಿಡಗಳು, ನಾವಿರುವ ಭೂಮಿ, ಸಾಗರ–ಸರೋವರಗಳು, ಹಳ್ಳಕೊಳ್ಳಗಳು, ಪಶುಪಕ್ಷಿಗಳು ಅರಣ್ಯ, ಗಾಳಿ, ಆಕಾಶ ಇವೆಲ್ಲವೂ ಸೇರಿ ಪರಿಸರವೆನಿಸಿದೆ. ಈ ಪರಿಸರವನ್ನೇ ಪ್ರಕೃತಿ ಅಥವಾ ನಿಸರ್ಗವೆಂದು ಕರೆಯುತ್ತಾರೆ. ಪರಿಸರವನ್ನು ಮುಖ್ಯವಾಗಿ ಪ್ರಾಕೃತಿಕ ಪರಿಸರ ಮತ್ತು ಮಾನವ ನಿರ್ಮಿತ ಪರಿಸರವೆಂದು ವಿಭಾಗಿಸುತ್ತೇವೆ. ನದಿ, ಸಮುದ್ರ, ಸರೋವರ, ಅರಣ್ಯ, ಬೆಟ್ಟ–ಗುಡ್ಡ, ಪರ್ವತ ಮುಂತಾದವುಗಳು ಪ್ರಾಕೃತಿಕ ಪರಿಸರವಾದರೆ, ಕಟ್ಟಡಗಳು, ಕೃಷಿಭೂಮಿ, ಕೈಗಾರಿಕೆಗಳು, ನಗರಗಳು, ಅಣೆಕಟ್ಟುಗಳು, ಕಾಲುವೆ, ರಸ್ತೆಗಳು ಮಾನವ ನಿರ್ಮಿತ ಪರಿಸರವಾಗಿದೆ. ಪರಿಸರವನ್ನು ಬಿಟ್ಟು ಮನುಷ್ಯ ಜೀವನ ಸಾಧ್ಯವೇ ಇಲ್ಲ. ಆದರೆ ಇಂದು ಮನುಷ್ಯ ತನ್ನ ಸ್ವಾರ್ಥ ಸುಖಕ್ಕಾಗಿ ಪರಿಸರವನ್ನು ದುರ್ಬಳಕೆ ಮಾಡುತ್ತಿದ್ದಾನೆ. ಪರಿಸರವನ್ನು ಹಾಳು ಮಾಡುತ್ತಿದ್ದಾನೆ. ಇದರಿಂದಾಗಿ, ಅತಿವೃಷ್ಟಿ, ಅನಾವೃಷ್ಟಿ, ಹವಾಮಾನದ ಏರುಪೇರುಗಳು ಸಂಭವಿಸಿ, ಸುನಾಮಿ, ಪ್ರವಾಹ, ಚಂಡಮಾರುತ, ಭೂಕಂಪ ಮೊದಲಾದ ಪ್ರಕೃತಿ ವಿಕೋಪಗಳು ಉಂಟಾಗುತ್ತಿವೆ.

ಪ್ರಶ್ನೆಗಳು:

ಅ) ಪ್ರಕೃತಿ ವಿಕೋಪಗಳು ಉಂಟಾಗಲು ಕಾರಣಗಳೇನು?

ಆ) ಪ್ರಕೃತಿ ಎಂದರೇನು? ಅದರ ಬಗೆಗಳಾವುವು?

44. ನಿಮ್ಮನ್ನು ಸರ್ಕಾರಿ ಪ್ರೌಢಶಾಲೆ, ಬೀದರ್‌ನ ಮೋಹನ್/ಮೋನಿಕಾ ಎಂಬ ವಿದ್ಯಾರ್ಥಿ ಎಂದು ಭಾವಿಸಿಕೊಂಡು ನಿನ್ನ ಅರ್ಧ ವಾರ್ಷಿಕ ಪರೀಕ್ಷೆ ಸಿದ್ಧತೆ ಕುರಿತು ಚಾಮರಾಜನಗರದಲ್ಲಿರುವ ನಿಮ್ಮ ತಾಯಿಯವರಿಗೆ ಒಂದು ಪತ್ರ ಬರೆಯಿರಿ.

**1 × 5 = 5**

ಅಥವಾ

ನಿಮ್ಮನ್ನು ಶಿವಮೊಗ್ಗದ ಮೊರಾರ್ಜಿ ಪ್ರೌಢಶಾಲೆಯ ವಿಜಯ ಎಂಬ ವಿದ್ಯಾರ್ಥಿ ಎಂದು ಭಾವಿಸಿಕೊಂಡು ನಿಮ್ಮ ಶಾಲೆಯಲ್ಲಿ ನಡೆದ ಪ್ರತಿಭಾ ಕಾರಂಜಿ ಕಾರ್ಯಕ್ರಮವನ್ನು ಕುರಿತು ವಿಜಯ ಕರ್ನಾಟಕ ಪತ್ರಿಕೆಯ ಸಂಪಾದಕರಿಗೆ ಒಂದು ಪತ್ರ ಬರೆಯಿರಿ.

45. **ಈ ಕೆಳಗಿನ ವಿಷಯಗಳಲ್ಲಿ ಯಾವುದಾದರೂ ಒಂದನ್ನು ಕುರಿತು ಹದಿನೈದು ವಾಕ್ಯಗಳಿಗೆ ಕಡಿಮೆಯಿಲ್ಲದಂತೆ ಪ್ರಬಂಧ ಬರೆಯಿರಿ.** **1 × 5 = 5**

* ಮಹಿಳಾ ಸಬಲೀಕರಣ

ಅಥವಾ

* ಪ್ರವಾಹ ಕಾರಣಗಳು ಮತ್ತು ಪರಿಹಾರಗಳು

****************

## ಸರ್ಕಾರಿ ಪ್ರೌಢಶಾಲೆ, ಕುರುವಂಕ. ಅರಸೀಕೆರೆ ತಾ. ಹಾಸನ ಜಿಲ್ಲೆ.

## ಎಸ್. ಎಸ್. ಎಲ್. ಸಿ. ಅರ್ಧ ವಾರ್ಷಿಕ ಪರೀಕ್ಷೆ – ಸೆಪ್ಟಂಬರ್ 2019

## ಮಾದರಿ ಉತ್ತರ ಪತ್ರಿಕೆ

ಸಮಯ: 3 ಗಂಟೆ    **ಪ್ರಥಮ ಭಾಷೆ ಕನ್ನಡ (01 K)**    ಅಂಕಗಳು : 100

**ಈ ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ಕೊಡಲಾಗಿದೆ. ಅವುಗಳಲ್ಲಿ ಹೆಚ್ಚು ಸೂಕ್ತವಾದ ಉತ್ತರವನ್ನು ಆರಿಸಿ, ಕ್ರಮಾಕ್ಷರದೊಂದಿಗೆ ಬರೆಯಿರಿ.** **6 × 1 = 6**

1. ಈ ಕೆಳಗಿನವುಗಳಲ್ಲಿ ಅನುನಾಸಿಕ ಅಕ್ಷರಗಳ ಗುಂಪು
   ಉತ್ತರ: ಡಿ) ಙ ಞ ಣ ನ ಮ
2. ರವಿಯು ಮನೆಯಲ್ಲಿ ಊಟಕ್ಕೆ ಬಂದನು– ಈ ವಾಕ್ಯದಲ್ಲಿ ಸಂಪ್ರದಾನ ಕಾರಕ ನಾಮಪದ
   ಉತ್ತರ: ಸಿ) ಊಟಕ್ಕೆ
3. ಅತಿವೃಷ್ಟಿಯು ಬಂದೀತು ಎಂದು ಜನಜಂಗುಳಿ ಭಾವಿಸಲಿ. ಈ ವಾಕ್ಯದಲ್ಲಿರುವ ವಿಧ್ಯರ್ಥಕ ಕ್ರಿಯಾಪದ
   ಉತ್ತರ: ಸಿ) ಭಾವಿಸಲಿ
4. **ಬೆಳಕಿಗೊಲಿದವರ್** ಉರಿವ ಬತ್ತಿಯ ಕರುಕ ಕಾಣರು– ಗೆರೆ ಎಳೆದ ಪದದಲ್ಲಿರುವ ಸಂಧಿ
   ಉತ್ತರ: ಡಿ) ಲೋಪಸಂಧಿ
5. ಗೆಳೆಯಗೆಳತಿಯರು ನಡುರಾತ್ರಿಯಲ್ಲಿ ಅರಮನೆ ನೋಡಲು ಮನಸ್ಸುಮಾಡಿದರು.
   ಈ ವಾಕ್ಯದಲ್ಲಿ ಅಂಶಿಸಮಾಸಕ್ಕೆ ಉದಾಹರಣೆ
   ಉತ್ತರ: ಬಿ) ನಡುರಾತ್ರಿ
6. ಬಳೆಗಾರನು ಜಾಣ್ಮೆಯಿಂದ ಹಣವಂತರಿಗೆ ಹೆಚ್ಚಿನ ಹಣಕಾಸಿಗೆ ಮಾರಿದು.
   ಈ ವಾಕ್ಯದಲ್ಲಿರುವ ತದ್ಧಿತಾಂತ ಭಾವನಾಮ ಪದ
   ಉತ್ತರ: ಬಿ) ಜಾಣ್ಮೆ

**ಈ ಕೆಳಗಿನ ಮೊದಲೆರಡು ಪದಗಳಿಗೆ ಇರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿಹೊಂದುವ ಸಂಬಂಧೀ ಪದವನ್ನು ಬರೆಯಿರಿ:** **1 × 4 =4**

7. ಅಬಕಾರಿ : ಫಾರ್ಸಿ : : ಅನಾನಸು : ________ ಉತ್ತರ: ಪೋರ್ಚುಗೀಸ್
8. ಘೋರ : ಆಪತ್ತು : : ಕೈವಾರ : ________ ಉತ್ತರ: ಹೊಗಳಿಕೆ
9. ಶರಶ್ಚಂದ್ರ : ಶ್ಚುತ್ವಸಂಧಿ : : ವಾಙ್ಮಯ : ________ ಉತ್ತರ: ಅನುನಾಸಿಕ ಸಂಧಿ
10. ನಮೋ ನಮೋ : ದ್ವಿರುಕ್ತಿ : : ಕೆರೆಕಟ್ಟೆಗಳು : ________ ಉತ್ತರ: ಜೋಡುನುಡಿ

**ಈ ಕೆಳಗಿನ ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ.** **7 × 1 = 7**

11. ರಾಹಿಲನು ತುರ್ತುಪರಿಸ್ಥಿತಿ ನಿರ್ವಹಣೆಗೆ ಭದ್ರವಾಗಿ ಹಿಡಿದುಕೊಂಡಿದ್ದೇನು?
ಉ: ರಾಹಿಲನು ತುರ್ತು ಪರಿಸ್ಥಿತಿಗೆ ಬೇಕಾದ ಶಸ್ತ್ರ ಚಿಕಿತ್ಸಾ ಸಾಮಾನುಗಳ ಪೆಟ್ಟಿಗೆಯನ್ನು ಭದ್ರವಾಗಿ ಹಿಡಿದುಕೊಂಡನು.
12. ಯುದ್ಧದ ಬಗೆಗೆ ಮುದುಕಿಯ ಅಭಿಪ್ರಾಯವೇನು?
ಉ: "ಎಲ್ಲರಿಗೂ ದೇಹಕ್ಕೂ ಮನಸ್ಸಿಗೂ ಗಾಯ ಮಾಡುವುದೇ ಯುದ್ಧದ ಪರಿ" ಎಂಬುದು ಯುದ್ಧದ ಬಗೆಗೆ ಮುದುಕಿಯ ಅಭಿಪ್ರಾಯವಾಗಿದೆ.
13. ಮತಂಗಾಶ್ರಮದಲ್ಲಿ ವಾಸವಿದ್ದ ತಪಸ್ವಿನಿ ಯಾರು?
ಮತಂಗಾಶ್ರಮದಲ್ಲಿ ವಾಸವಿದ್ದ ತಪಸ್ವಿನಿ ಶಬರಿ.
14. ಲಂಡನ್ನಿನ ರಸ್ತೆಗಳಲ್ಲಿ ನಿಲ್ಲುವುದನ್ನು ತಪ್ಪಿಸಲು ಮಾಡಿರುವ ವ್ಯವಸ್ಥೆಯೇನು?
ಉ: ಲಂಡನ್ನಿನ ರಸ್ತೆಗಳಲ್ಲಿ ನಿಲ್ಲುವುದನ್ನು ತಪ್ಪಿಸಲು ಭೂಗರ್ಭದಲ್ಲಿ ಗಾಡಿಗಳನ್ನು ಹಾಕಿದ್ದಾರೆ.
15. ಯಾವ ಎಚ್ಚರದೊಳು ಬದುಕಬೇಕಿದೆ?
ಉ: ಮತಗಳೆಲ್ಲವೂ ಪಥಗಳು ಎನ್ನುವ ಎಚ್ಚರದೊಳು ಬದುಕಬೇಕಿದೆ.
16. ಕುಮಾರವ್ಯಾಸನ ಆರಾಧ್ಯ ದೈವ ಯಾರು?
ಕುಮಾರವ್ಯಾಸನ ಆರಾಧ್ಯ ದೈವ ಗದುಗಿನ ವೀರನಾರಾಯಣ.

17. ಇಳೆಯು ಯಾವ ಸಂಭ್ರಮದಲ್ಲಿದೆ?
ಉ: ಇಳೆಯು ಕಡಲು ಉಕ್ಕಿ ಹರಿಯುವ ಸಂಭ್ರಮದಲ್ಲಿದೆ.

**ಈ ಕೆಳಗಿನವುಗಳಿಗೆ ಮೂರು – ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ** **10 × 02 = 20**

18. ಡಾಕ್ಟರ್‌ಗೆ ವಿಮಾನದ ಪೈಲಟ್ ಏನು ಹೇಳಿದನು?
"ಡಾಕ್ಟರ್! ರೇಡಿಯೋ ಸಮನಾಗಿ ಕಾರ್ಯನಿರ್ವಹಿಸುತ್ತಿಲ್ಲ. ಗ್ರೌಂಡಿನೊಡನೆ ಸಂಪರ್ಕ ಬೆಳೆಸಲು ಸಾಧ್ಯವಾಗುತ್ತಿಲ್ಲ. ಎಲ್ಲಾದರೂ ಹೇಗಾದರೂ ಇಳಿಯೋಣವೆಂದರೆ ಈ ಕತ್ತಲೆಯಲ್ಲಿ ಏನೂ ಕಾಣಿಸ್ತಾ ಇಲ್ಲವಲ್ಲ?" ಎಮದು ವಿಮಾನದ ಪೈಲಟ್ ನುಡಿದನು.

19. ಶಬರಿಯು ರಾಮಲಕ್ಷ್ಮಣರನ್ನು ಉಪಚರಿಸಿದ ರೀತಿಯನ್ನು ವಿವರಿಸಿ.
ಶಬರಿಯು ರಾಮಲಕ್ಷ್ಮಣರನ್ನು ಕಂಡು ಬೆರಗಾಗಿ, ಹತ್ತಿರಕ್ಕೆ ಬಂದು, ಮೈಯನ್ನು ಮುಟ್ಟಿ, ಕಾಲಿಗೆ ಬಿದ್ದು ನಮಸ್ಕರಿಸಿ, ಕೈ ಕಣ್ಣಿಗೊತ್ತಿಕೊಂಡಳು. ಬಗೆಬಗೆಯ ಸುವಾಸನೆಯುಳ್ಳ ಹೂಮಾಲೆಯನ್ನು ಕೊರಳಿಗೆ ಹಾಕಿ ಸಂತಸಪಟ್ಟಳು. "ಜಗದಲ್ಲಿ ಇದರಂತ ರುಚಿಯಾದ ಹಣ್ಣೇ ಇಲ್ಲ. ನಿಮಗೆಂದೆ ತಂದೆನು" ಎಂದು ಹೇಳುತ ಸವಿಯಾದ ಹಣ್ಣುಗಳನ್ನು ನೀಡಿ ಉಪಚರಿಸಿದಳು.

20. ಸಾಮ್ರಾಟರ ರಾಜ್ಯಾಭಿಷೇಕವಾಗುವ ಸಿಂಹಾಸನದ ಮೇಲಿರುವ ಕಲ್ಲುಪಾಟಿಯ ವಿಶೇಷತೆಯೇನು?
ಸಾಮ್ರಾಟರ ರಾಜ್ಯಾಭಿಷೇಕವಾಗುವಾಗ ಅವರ ಸಿಂಹಾಸನದ ಮೇಲೆ ಒಂದು ಕಲ್ಲು ಪಾಟಿಯನ್ನು ಹಾಕುತ್ತಾರೆ. ಪಟ್ಟಾಭಿಷೇಕವಾಗುವಾಗ ಮಾತ್ರ ಸಾಮ್ರಾಟರು ಇದರ ಮೇಲೆ ಕೂಡಬೇಕು. ಈ ಶಿಲೆಯನ್ನು ಒಳಗೊಂಡ ಸಿಂಹಾಸನವು ವೆಸ್ಟ್‌ಮಿನ್‌ಸ್ಟರ್ ಮಂದಿರದಲ್ಲಿಯ ಒಂದು ಭಾಗದಲ್ಲಿದೆ. 'ಸ್ಟೋನ್ ಆಫ್ ಸ್ಕೋನ್' ಎಂದು ಇದರ ಹೆಸರು. 3ನೇ ಎಡ್ವರ್ಡನು ಸ್ಕಾಟ್‌ಲೆಂಡಿನ ಅರಸರಿಂದ ಇದನ್ನು ಕಿತ್ತುಕೊಂಡು ಬಂದಂತೆ ಕಾಣುತ್ತದೆ. ಅಂದಿನಿಂದ ಎಲ್ಲ ಸಾಮ್ರಾಟರ ಅಭಿಷೇಕವು ಈ ಕಲ್ಲಿನ ಮೇಲೆಯೇ ಆಗಿದೆ.

21. ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಯಾವ ನೀರಾವರಿ ಯೋಜನೆಗಳು ಕಾರ್ಯರೂಪಕ್ಕೆ ಬಂದವು?
1900ರಲ್ಲಿಯೇ ಶಿವನಸಮುದ್ರದ ಬಳಿ ಕಾವೇರಿ ನದಿಯಿಂದ ಜಲವಿದ್ಯುತ್ ಉತ್ಪಾದನಾ ಕೇಂದ್ರ ಪ್ರಾರಂಭವಾಯಿತು. ಇದು ಭಾರತ ಮಾತ್ರವಲ್ಲ, ಏಷ್ಯಾ ಖಂಡದಲ್ಲೇ ಮೊದಲ ಜಲವಿದ್ಯುತ್ ಯೋಜನೆ. 1907ರಲ್ಲಿ ವಾಣಿ ವಿಲಾಸ ಸಾಗರ (ಮಾರಿ ಕಣಿವೆ) ಕಟ್ಟಲ್ಪಟ್ಟಿತು. 1911ರಲ್ಲಿ ಕೃಷ್ಣರಾಜ ಸಾಗರ ಇವರ ಬೃಹತ್ ಕೊಡುಗೆ.

22. ಹಲಗಲಿಗೆ ದಂಡು ಬರಲು ಕಾರಣವೇನು?
ಹಲಗಲಿಯ ಬೇಡರಾದ ಪೂಜೇರಿ ಹನುಮ, ಬ್ಯಾಡರ ಬಾಲ, ರಾಮ, ಜಡಗ ಇವರುಗಳು ಬ್ರಿಟಿಷ್ ಸರ್ಕಾರ ಹೊರಡಿಸಿದ್ದ ನಿಶ್ಶಸ್ತ್ರೀಕರಣದ ಆದೇಶವನ್ನು ವಿರೋಧಿಸಿ ತಮ್ಮಲ್ಲಿರುವ ಆಯುಧಗಳನ್ನು ಕೊಡಲು ಒಪ್ಪದೆ ದಂಗೆ ಎದ್ದರು. ಈ ದಂಗೆಯನ್ನು ಹತ್ತಿಕ್ಕಲು ಬಂದ ಕಾರಕೂನನ ಕಪಾಳಕ್ಕೆ ಹೊಡೆದು ಸಿಪಾಯಿಗಳನ್ನು ಹೊಡೆದುರುಳಿಸಿದರು ಇದರಿಂದ ಕೋಪಗೊಂಡ ಕುಂಪಣಿ ಸರ್ಕಾರದ ಅಧಿಕಾರಿಗಳು ಹಲಗಲಿಯ ಬೇಡರ ದಂಗೆಯನ್ನು ಬಗ್ಗುಬಡಿಯಲು ದಂಡನ್ನು ಕರೆಯಿಸಿದರು.

23. ಕುಂತಿ, ಮಾದ್ರಿಯರು ಯಾರ್‍ಯಾರ ಅನುಗ್ರಹದಿಂದ ಮಕ್ಕಳನ್ನು ಪಡೆದರು?
ಕುಂತಿಯು ಯಮಧರ್ಮನ ಅನುಗ್ರಹದಿಂದ ಧರ್ಮರಾಯನನ್ನು, ವಾಯುವಿನ ಅನುಗ್ರಹದಿಂದ ಭೀಮನನ್ನು, ಇಂದ್ರನ ಅನುಗ್ರಹದಿಂದ ಅರ್ಜುನನ್ನು ಪಡೆದಳು. ಮಾದ್ರಿಯು ಅಶ್ವಿನೀದೇವತೆಗಳ ಅನುಗ್ರಹದಿಂದ ನಕುಲ ಸಹದೇವರನ್ನು ಪಡೆದಳು.

24. ವಿವೇಕಾನಂದರು ಧಾರ್ಮಿಕ ಮೂಲಭೂತವಾದಕ್ಕೆ ಉಗ್ರ ವಿರೋಧಿಯಾಗಿದ್ದರು. ಹೇಗೆ?
ಉ: ದೈಹಿಕ ಹಸಿವನ್ನು ಇಂಗಿಸುವುದು ವಿವೇಕಾನಂದರ ಮೊದಲ ಆದ್ಯತೆ. ಅನಂತರ ಆತ್ಮದ ಹಸಿವು, ವೇದಾಂತದ ಹಸಿವು, ಸಾಂಸ್ಥಿಕವಾದ ಧರ್ಮದ ಹಸಿವು. ಈ ಕಾರಣದಿಂದಾಗಿಯೇ ವಿವೇಕಾನಂದರು ಯಾವತ್ತೂ ಧಾರ್ಮಿಕ ಮೂಲಭೂತವಾದಿಯಾಗಿರಲಿಲ್ಲ. ಬದಲಾಗಿ ಧಾರ್ಮಿಕ ಮೂಲಭೂತವಾದಕ್ಕೆ ಉಗ್ರ ವಿರೋಧಿಯಾಗಿದ್ದರು.

25. ವಿವೇಕಾನಂದರು ಇಂದಿಗೂ ಸತ್ಯ. ಹೇಗೆ?
ಉ: ವಿವೇಕಾನಂದರ 'ಧೀರೋದಾತ್ತ' ನಿಲುವುಗಳು ವೈಯಕ್ತಿಕ ಮಾತ್ರವಾಗದೆ ಸಾಮಾಜಿಕವಾಗಿ ರೂಪಾಂತರಗೊಂಡು ಗಟ್ಟಿಯಾದದ್ದೇ ಅವರ ವ್ಯಕ್ತಿತ್ವದ ವಿಶೇಷ; ಅವರದು ಪ್ರಖರ ಸಾಮಾಜಿಕ ವ್ಯಕ್ತಿತ್ವ. ದೀನ ದಲಿತರ ಉದ್ಧಾರವೇ ಅವರ ಧರ್ಮದ ಮೊದಲ ತತ್ವ; ಅದೇ ಅವರ ವೈಚಾರಿಕ ಸತ್ವ. ಆದ್ದರಿಂದ ವಿವೇಕಾನಂದರು ಇಂದಿಗೂ ಸತ್ಯ.

26. ಭಗತ್‌ಸಿಂಗ್ ಮತ್ತು ಅವನ ಸಹಚರರಿಗೆ ಗಲ್ಲುಶಿಕ್ಷೆಯಾಗಲು ಕಾರಣವೇನು?

ಉ: ಜಲಿಯನ್ ವಾಲಾಬಾಗಿನ ರಕ್ತಸಿಕ್ತವಾಗಿದ್ದ ಮಣ್ಣನ್ನು ನಿಧಿಯಂತೆ ಕಾಪಾಡಿಕೊಂಡು ಬಂದಿದ್ದ ಬಾಲಕ ಭಗತ್‌ಸಿಂಗ್ ಮುಂದೆ ತನ್ನ ಕ್ರಾಂತಿಕಾರಿ ಗುಂಪಿನ ಸಹಾಯದಿಂದ ಬ್ರಿಟಿಷ್ ಸರ್ಕಾರದ ವಿರುದ್ಧ ತನ್ನ ಸೇಡನ್ನು ತೀರಿಸಿಕೊಳ್ಳುತ್ತಾನೆ. ಇದರ ಫಲವಾಗಿ ಮರಣದಂಡನೆಗೆ ಈಡಾಗಿ ತನ್ನ ಸಹಚರರಾದ ಸುಖದೇವ್, ರಾಜ್‌ಗುರು, ಭಟುಕೇಶ್ವರ ದತ್ತರೊಂದಿಗೆ ಗಲ್ಲುಶಿಕ್ಷೆಯಾಗಲು ಕಾರಣನಾದನು?

27. ಭಗತ್‌ಸಿಂಗ್‌ನ ಸಹೋದರಿಗೆ ಅವನ ಉಪವಾಸಕ್ಕೆ ಕಾರಣ ಹೇಗೆ ತಿಳಿಯಿತು?

ಉತ್ತರ: ಭಗತ್‌ಸಿಂಗನು ಜಲಿಯನ್ ವಾಲಾಬಾಗ್ ಹತ್ಯಾಕಾಂಡದಲ್ಲಿ ಪ್ರಾಣ ಕಳೆದುಕೊಂಡ ಸ್ಥಳದಲ್ಲಿನ ಮಣ್ಣನ್ನು ತನ್ನ ಊಟದ ಡಬ್ಬಿಯಲ್ಲಿ ತಂದಿದ್ದನು. ರಾತ್ರಿ ಮನೆಗೆ ಹಿಂತಿರುಗಿದಾಗ ಅವನ ಸಹೋದರಿ ಎಂದಿನಂತೆ ಅವನನ್ನು ಊಟಕ್ಕೆ ಎಬ್ಬಿಸಿದರೆ ಒಲ್ಲೆನೆಂದು ಮುಖ ತಿರುಗಿಸಿದನು. ಅವನಿಗೆ ಪ್ರಿಯವಾದ ಮಾವಿ ಹಣ್ಣೊಂದನ್ನು ಕೂಡ ನಿರಾಕರಿಸಿದನು, ಅವಳನ್ನು ಮನೆಯ ಹಿಂಭಾಗಕ್ಕೆ ಕರೆದೊಯ್ದು ತನ್ನ ಡಬ್ಬಿಯಲ್ಲಿದ್ದ ಮಣ್ಣನ್ನು ತೋರಿಸಿದ. ರಕ್ತ ಕಲೆಸಿದಂತಿದ್ದ ಆ ಮಣ್ಣು ಎಲ್ಲಿಯದೆಂದು ತಿಳಿದಾಗ ಅವನ ಉಪವಾಸಕ್ಕೆ ಕಾರಣ ದೊರೆಯಿತು.

**ಈ ಸಾಹಿತಿ/ಕವಿಗಳ ಸ್ಥಳ, ಕಾಲ, ಕೃತಿ, ಪ್ರಶಸ್ತಿ/ಬಿರುದುಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ. 02 × 03 = 06**

28. ಪು. ತಿ. ನರಸಿಂಹಾಚಾರ್

ಪುರೋಹಿತ ತಿರುನಾರಾಯಣಯ್ಯಂಗಾರ್ಯ ನರಸಿಂಹಾಚಾರ್ಯ ಅವರು ಕ್ರಿ.ಶ.1905 ರಲ್ಲಿ ಮಂಡ್ಯಜಿಲ್ಲೆಯ ಮೇಲುಕೋಟೆಯಲ್ಲಿ ಜನಿಸಿದರು. ಇವರು ಶಬರಿ, ಅಹಲ್ಯೆ, ಮೊದಲಾದ ಲಲಿತಪ್ರಬಂಧ ಕೃತಿಗಳನ್ನೂ ರಚಿಸಿದ್ದಾರೆ. ಶ್ರೀಯುತರ 'ಶ್ರೀ ಹರಿಚರಿತೆ' ಕೃತಿಗೆ ಕರ್ನಾಟಕ ಸರ್ಕಾರದಿಂದ 'ಪಂಪ ಪ್ರಶಸ್ತಿ' ನೀಡಿ ಗೌರವಿಸಲಾಗಿದೆ. ಶ್ರೀಯುತರಿಗೆ 'ಪಂಪ ಪ್ರಶಸ್ತಿ' ಮತ್ತು ಕೇಂದ್ರ ಹಾಗೂ ರಾಜ್ಯ ಸಾಹಿತ್ಯ ಅಕಾಡೆಮಿ ಪ್ರಶಸ್ತಿಗಳನ್ನು ನೀಡಿ ಗೌರವಿಸಲಾಗಿದೆ.

29. ಜಿ.ಎಸ್.ಶಿವರುದ್ರಪ್ಪ

ಉ: ಇವರು ಕ್ರಿ.ಶ.1926 ರಲ್ಲಿ ಶಿವಮೊಗ್ಗ ಜಿಲ್ಲೆಯ ಶಿಕಾರಿಪುರದಲ್ಲಿ ಜನಿಸಿದರು. ಇವರ ಪೂರ್ಣ ಹೆಸರು: ಗುಗ್ಗರಿ ಶಾಂತವೀರಪ್ಪ ಶಿವರುದ್ರಪ್ಪ.* ಇವರ ಪ್ರಮುಖ ಕೃತಿಗಳೆಂದರೆ; 'ಸಾಮಗಾನ', 'ಚೆಲುವು–ಒಲವು', 'ದೇವಶಿಲ್ಪಿ', 'ದೀಪದ ಹೆಜ್ಜೆ', 'ಅನಾವರಣ', 'ವಿಮರ್ಶೆಯ ಪೂರ್ವ ಪಶ್ಚಿಮ', 'ಮಾಸ್ಕೋದಲ್ಲಿ ಇಪ್ಪತ್ತೆರಡು ದಿನಗಳು', 'ಸೌಂದರ್ಯ ಸಮೀಕ್ಷೆ'. ಇವರಿಗೆ ದೊರೆತಿರುವ ಪ್ರಮುಖ ಪ್ರಶಸ್ತಿಗಳೆಂದರೆ ಕೇಂದ್ರಸಾಹಿತ್ಯ ಅಕಾಡೆಮಿ ಪ್ರಶಸ್ತಿ, ಕನ್ನಡ ವಿಶ್ವವಿದ್ಯಾನಿಲಯದ 'ನಾಡೋಜ' ಪ್ರಶಸ್ತಿ, 'ಗೌರವ ಡಿ.ಲಿಟ್' ಪ್ರಶಸ್ತಿ ಹಾಗೂ 'ರಾಷ್ಟ್ರಕವಿ' ಪ್ರಶಸ್ತಿಗಳು ದೊರೆತಿವೆ.

**30. ಈ ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗ ಮಾಡಿ, ಛಂದಸ್ಸಿನ ಹೆಸರನ್ನು ಬರೆಯಿರಿ. 1 × 3 =3**

— U | U U U U | U U U | — U U
ಶೀ ರಿ | ಸಿ ಯೆ ಪ ತಿ | ಯ ವ ಸ | ರ ಕ್ಕೆ ಶ

— U | U U — | U U U | — U U
ರೀ ರ | ವ ನು ನೂ | ಕು ವೆ ನು | ನಿ ನ್ನ ಯ

— U | — U U | — U | U U — | — U | U U — | —
ವೀ ರ | ರೈ ವ ರ | ನೋ ಯಿ | ಸೆ ನು ರಾ | ಜೀ ವ | ಸ ಖ ನಾ | ಣೆ

ಛಂದಸ್ಸು : ಭಾಮಿನೀ ಷಟ್ಪದಿ

**31. ಈ ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು ಸಮನ್ವಯಿಸಿ. 1 × 3 =3**

"ಒಳಗಿನ ಮಂದಿ ಗುಂಡು ಹೊಡಿದರೊ ಮುಂಗಾರಿ ಸಿಡಿಲ ಸಿಡಿದ್ಹಾಂಗ"

ಅಲಂಕಾರ : ಉಪಮಾಲಂಕಾರ

ಲಕ್ಷಣ : ಎರಡು ವಸ್ತುಗಳ ಸಾದೃಶ್ಯಗಳನ್ನು ಪರಸ್ಪರ ಹೋಲಿಸಿವುದು ಉಪಮಾಲಂಕಾರ

ಉಪಮೇಯ : ಗುಂಡು ಸುರಿಯುವುದು

ಉಪಮಾನ : ಸಿಡಿಲ ಸಿಡಿಯುವುದು

ಉಪಮಾ ವಾಚಕ : ಹಾಂಗ

ಸಮಾನಧರ್ಮ : ಸಿಡಿಯುವುದು

ಸಮನ್ವಯ : ಇಲ್ಲಿ ಉಪಮೇಯವಾದ ಗುಂಡು ಸಿಡಿಯುವುದನ್ನು ಉಪಮಾನವಾದ ಸಿಡಿಲು ಸಿಡಿಯುವುದಕ್ಕೆ ಹೋಲಿಸಲಾಗಿದೆ.

**32. ಈ ಕೆಳಗೆ ಕೊಟ್ಟಿರುವ ಗಾದೆಗಳಲ್ಲಿ ಯಾವುದಾದರೂ ಒಂದನ್ನು ವಿಸ್ತರಿಸಿ ಬರೆಯಿರಿ.** **1 × 3 = 3**

ಬೆಳ್ಳಗಿರುವುದೆಲ್ಲಾ ಹಾಲಲ್ಲ.

**ಅಥವಾ**

ಇರುಳು ಕಂಡ ಬಾವಿಗೆ ಹಗಲು ಬಿದ್ದಂತೆ

| | |
|---|---|
| ಗಾದೆಯ ಮಹತ್ತ್ವದ ವಿವರಣೆ | : 1 ಅಂಕ |
| ಉದಾಹರಣೆಯೊಂದಿಗೆ ಅರ್ಥ ವಿವರಣೆ | : 1 ಅಂಕ |
| ಭಾಷಾ ಶೈಲಿ – ಪದಬಂಧ | : 1 ಅಂಕ |
| ಒಟ್ಟು | : 3 ಅಂಕಗಳು |

**ಈ ಕೆಳಗಿನ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ.** **06 × 03 = 18**

33.“ಯುದ್ಧಕ್ಕೆ ಹೋದ ತನ್ನ ಮಗನ ಕಣ್ಣುಗಳಂತೆಯೇ ಇವೆಯಲ್ಲ?”

ಆಯ್ಕೆ: ಈ ವಾಕ್ಯವನ್ನು ಸಾರಾ ಅಬೂಬಕ್ಕರ್ ಅವರು ರಚಿಸಿರುವ ‘ಚಪ್ಪಲಿಗಳು’ ಕವನ ಸಂಕಲನದಿಂದ ಆರಿಸಲಾಗಿರುವ ‘ಯುದ್ಧ’ ಎಂಬ ಗದ್ಯಭಾಗದಿಂದ ತೆಗೆದುಕೊಳ್ಳಲಾಗಿದೆ.

ಸಂದರ್ಭ: “ಬಂದಿದ್ದಾತ ತಮ್ಮವನಲ್ಲ” ಎಂಬ ಮುದುಕಿಯ ಸಂದೇಹ ನಿಜವಾಗಿತ್ತು. ತಮಗೆ, ತಮ್ಮ ದೇಶಕ್ಕೆ ದ್ರೋಹ ಬಗೆಯುವವನು. ಎಂದು ಕ್ಷಣಕಾಲ ಆಕೆಯ ಕಣ್ಣುಗಳು ರೋಷದಿಂದ ಕೆರಳಿ ಬಾಗಿಲ ಬಳಿ ಸಮೀಪಿಸುತ್ತಾ ಆತನ ಮುಖ ನೋಡಿದ ಸಂದರ್ಭದಲ್ಲಿ “ಯುದ್ಧಕ್ಕೆ ಹೋದ ತನ್ನ ಮಗನ ಕಣ್ಣುಗಳಂತೆಯೇ ಇವೆಯಲ್ಲ?” ಎಂದು ಕೊಳ್ಳುತ್ತಾಳೆ.

ಸ್ವಾರಸ್ಯ: ಕಷ್ಟದಲ್ಲಿದ್ದರೂ ತನ್ನ ಸೊಸೆಯ ಪ್ರಾಣ ಉಳಿಸಿದ ರಾಹಿಲನಲ್ಲಿ ತನ್ನ ಮಗನನ್ನು ಕಾಣುವ ಮುದುಕಿಯ ಪುತ್ರವಾತ್ಸಲ್ಯ ಇಲ್ಲಿ ಸ್ವಾರಸ್ಯಪೂರ್ಣವಾಗಿ ವ್ಯಕ್ತವಾಗಿದೆ.

34. “ಹೊತ್ತು ! ಹೊತ್ತು ! ಹೊತ್ತೇ ಹಣ”

ಆಯ್ಕೆ: ಈ ವಾಕ್ಯವನ್ನು ವಿ.ಕೃ. ಗೋಕಾಕ ಅವರ ‘ಸಮುದ್ರದಾಚೆಯಿಂದ’ ಎಂಬ ಪ್ರವಾಸ ಕೃನದಿಂದ ಆರಿಸಲಾಗಿರುವ ‘ಲಂಡನ್ ನಗರ’ ಎಂಬ ಗದ್ಯಭಾಗದಿಂದ ತೆಗೆದುಕೊಳ್ಳಲಾಗಿದೆ.

ಸಂದರ್ಭ: ಲಂಡನ್ ನಗರದ ಬೀದಿಯಲ್ಲಿ ಲಕ್ಷಾನುಲಕ್ಷ ಜನರು ಅವಸರದಿಂದ ಓಡಾಡುತ್ತಿರುವುದನ್ನು ನೋಡಿ time! time! time is money (ಹೊತ್ತು! ಹೊತ್ತು! ಹೊತ್ತೇ ಹಣ) ಎಂದು ಈ ಸಂದರ್ಭದಲ್ಲಿ ಹೇಳಿದ್ದಾರೆ.

ಸ್ವಾರಸ್ಯ: ಸಮಯಕ್ಕೆ ಬಹಳ ಪ್ರಾಮುಖ್ಯತೆ ಇದೆ. ಅದರಲ್ಲೂ ವಿದೇಶಗಳಲ್ಲಿ ಸಮಯವೇ ಹಣ ಎಂಬ ಮಾತು ಅಕ್ಷರಶಃ ನಿಜವಾಗಿದೆ ಎಂಬ ಮಾತು ಇಲ್ಲಿ ಸ್ವಾರಸ್ಯಪೂರ್ಣವಾಗಿ ವ್ಯಕ್ತವಾಗಿದೆ.

ಸ್ವಾರಸ್ಯ: ಸಾಧಕರ ಮಾರ್ಗದಲ್ಲಿ ನಡೆವಾಗ ಮಾನವನು ದಿಕ್ಕುತಪ್ಪಿದಂತಾದಾಗ “ಎಲ್ಲವೂ ಅಷ್ಟೇ! ಬರಿಯ ಮಣ್ಣು” ಎಂದು ಮನಸ್ಸಿನಲ್ಲಿ ಮೂಡುತ್ತದೆ. ನಶ್ವರವಾಗಿ ಕಾಣುತ್ತದೆ ಎಂಬುದು ಇಲ್ಲಿ ಸ್ವಾರಸ್ಯಪೂರ್ಣವಾಗಿ ವ್ಯಕ್ತವಾಗಿದೆ.

35.“ಆದರ್ಶ ಪುರುಷರೊಬ್ಬರು ದಿವಾನರಾದದ್ದು ಮೈಸೂರು ಸಂಸ್ಥಾನದ ಪುಣ್ಯ ವಿಶೇಷವೇ ಸರಿ.”

ಆಯ್ಕೆ:– ಈ ವಾಕ್ಯವನ್ನು ಶ್ರೀ ಡಿ.ಎಸ್. ಜಯಪ್ಪಗೌಡ ಅವರು ರಚಿಸಿರುವ ‘ದಿವಾನ್ ಸರ್ ಎಂ. ವಿಶ್ವೇಶ್ವರಯ್ಯನವರ ಕಾರ್ಯಸಾಧನೆಗಳು’ ಎಂಬ ಕೃತಿಯಿಂದ ಆಯ್ದ ‘ಭಾಗ್ಯಶಿಲ್ಪಿಗಳು’ ಎಂಬ ಗದ್ಯಭಾಗದಿಂದ ಆರಿಸಿಕೊಳ್ಳಲಾಗಿದೆ.

ಸಂದರ್ಭ:–ಮೈಸೂರು ಸಂಸ್ಥಾನದ ಮಹಾರಾಜರಾಗಿದ್ದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರಿಂದ ದಿವಾನರಾಗಿ ನೇಮಕಗೊಂಡ ವಿಶ್ವೇಶ್ವರಯ್ಯ ಅವರು ಆಡಳಿತದಲ್ಲಿ ಹೊಸ ಮಾದರಿಯನ್ನು ಅನುಷ್ಠಾಗೊಳಿಸಿದ ಸಂದರ್ಭದಲ್ಲಿ ಜನರು ಈ ರೀತಿ ಹಾಡಿ ಹೊಗಳುತ್ತಾರೆ.

ಸ್ವಾರಸ್ಯ:– ಮೈಸೂರು ಸಂಸ್ಥಾನದ ದಿವಾನರಾಗಿ ವಿಶ್ವೇಶ್ವರಯ್ಯ ಅವರು ಮಾಡಿದ ಕಾರ್ಯಗಳು ಅಭೂತಪೂರ್ವವಾದವುಗಳು ಎಂಬುದನ್ನು ಈ ಮಾತಿನಲ್ಲಿ ಬಹು ಸ್ವಾರಸ್ಯಪೂರ್ಣವಾಗಿ ಅಭಿವ್ಯಕ್ತಪಡಿಸಲಾಗಿದೆ.

36. “ಮಂಗಳ ಲೋಕದ ಅಂಗಳಕೇರಿ”

ಆಯ್ಕೆ:– ಈ ವಾಕ್ಯವನ್ನು ‘ಅಂಬಿಕಾತನಯದತ್ತ’ ಎಂಬ ಕಾವ್ಯನಾಮದಿಂದ ಪ್ರಸಿದ್ಧರಾದ ದ.ರಾ.ಬೇಂದ್ರೆ ಅವರು ರಚಿಸಿರುವ ‘ಗರಿ’ ಕವನ ಸಂಕಲನದಿಂದ ಆಯ್ದ ‘ಹಕ್ಕಿ ಹಾರುತಿದೆ ನೋಡಿದಿರಾ’ ಎಂಬ ಪದ್ಯಭಾಗದಿಂದ ಆರಿಸಲಾಗಿದೆ.

ಸಂದರ್ಭ:– ಕವಿ ದ.ರಾ.ಬೇಂದ್ರೆ ಅವರು ಕಾಲದ ಗತಿಯನ್ನು ಹಾರುವ ಹಕ್ಕಿಗೆ ಸಮೀಕರಿಸಿ ವರ್ಣಿಸುತ್ತಾ ; ಕಾಲಪಕ್ಷಿಯು 'ನಕ್ಷತ್ರಗಳನ್ನು ಮೀರಿ; ಚಂದ್ರಲೋಕದ ನೀರನ್ನು ಹೀರಿ; ಆಟವಾಡಲು ಹಾರಾಡಲು ಮಂಗಳ ಲೋಕದ ಅಂಗಳಕ್ಕೇರಿದೆ' ಎಂದು ವರ್ಣಿಸುವ ಸಂದರ್ಭದಲ್ಲಿ ಈ ಮಾತನ್ನು ಹೇಳುತ್ತಾರೆ.

ಸ್ವಾರಸ್ಯ :– ವೇಗದ ಕಾಲಗತಿಯಲ್ಲಿ ಮಾನವನು ವೈಜ್ಞಾನಿಕವಾಗಿ ಮುಂದುವರೆಯುತ್ತಾ ಚಂದ್ರ, ಮಂಗಳ ಗ್ರಹ ಮುಂತಾದ ಆಕಾಶ ಕಾಯಗಳೆಡೆಗೆ ಹಾರುತ್ತಿರುವುದನ್ನು ಈ ಮಾತಿನಲ್ಲಿ ಸ್ವಾರಸ್ಯಪೂರ್ಣವಾಗಿ ವರ್ಣಿಸಲಾಗಿದೆ.

37."ಎಲ್ಲ ಜನರಿಗೆ ಜೋರ ಮಾಡಿ ಕಸಿದು ಕೊಳ್ಳಿರಿ ಹತಾರ"

ಆಯ್ಕೆ:–ಈ ವಾಕ್ಯವನ್ನು ಡಾ. ಬಿ.ಎಸ್.ಗದ್ದಗಿಮಠ ಅವರು ಸಂಪಾದಿಸಿರುವ 'ಕನ್ನಡ ಜನಪದ ಗೀತೆಗಳು' ಕೃತಿಯಿಂದ ಆಯ್ದ 'ಹಲಗಲಿಯ ಬೇಡರು' ಎಂಬ ಲಾವಣಿಯಿಂದ ಆರಿಸಲಾಗಿದೆ.

ಸಂದರ್ಭ:– "ಕ್ರಿ.ಶ. 1857ರ ಪ್ರಥಮ ಸ್ವಾತಂತ್ರ್ಯ ಸಂಗ್ರಾಮದ ನಂತರ ಬ್ರಿಟಿಷ್ ಸರ್ಕಾರ ಅನುಮತಿ ಇಲ್ಲದೆ ಭಾರತೀಯರು ಶಸ್ತ್ರಾಸ್ತ್ರಗಳನ್ನು ಹೊಂದುವಂತಿಲ್ಲ ಮತ್ತು ತಮ್ಮಲ್ಲಿರುವ ಆಯುಧಗಳನ್ನು ಸರ್ಕಾರಕ್ಕೆ ಒಪ್ಪಿಸಬೇಕು" ಎಂಬ ಆದೇಶವನ್ನು ನೀಡಿದ ಸಂದರ್ಭದಲ್ಲಿ ಈ ಮಾತು ಬಂದಿದೆ.

ಸ್ವಾರಸ್ಯ :– ಭಾರತೀಯರ ಮೇಲಿನ ಬ್ರಿಟಿಷರ ದರ್ಪ ಈ ಮಾತಿನಲ್ಲಿ ವ್ಯಕ್ತಗೊಂಡಿದೆ. ಇದೇ ಹಲಗಲಿ ದಂಗೆಯ ಜ್ವಾಲೆ ಹೆಚ್ಚಾಗಲು ಕಾರಣವಾಯಿತು.

38. "ಬಾಯ್ದಂಬುಲಕೆ ಕೈಯಾನುವರೆ"

ಸಂದರ್ಭ :– ಕೃಷ್ಣನು ಪಾಂಡವ ಕೌರವರನಡುವೆ ಸಂಧಿ ಮಾಡಲುಹೋಗಿ, ವಿಫಲನಾಗಿ ಹಿಂದಿರುಗುವಾಗ ಕರ್ಣನನ್ನು ಜೊತೆಯಲ್ಲಿ ಕರೆದುಕೊಂಡು ಬಂದು, ಮೈದುನತನದ ಸರಸದಲ್ಲಿ ಮಾತನಾಡಿಸುವ ಸಂದರ್ಭದಲ್ಲಿ ಈ ಮಾತನ್ನು ಕೃಷ್ಣ ಕರ್ಣನಿಗೆ ಹೇಳುತ್ತಾನೆ.

ಸ್ವಾರಸ್ಯ :– "ಕರ್ಣ ನೀನು ಹಸ್ತಿನಾಪುರದ ರಾಜನಾದರೆ ನಿನಗೆ ಕೌರವರು ಮತ್ತು ಪಾಂಡವರು ಸೇವೆಯನ್ನು ಮಾಡುವರು ಅದನ್ನು ಬಿಟ್ಟು ನೀನು ದುರ್ಯೋಧನನ ಬಾಯೆಂಜಲಿಗೆ ಕೈಯೊಡ್ಡುವುದು ಸರಿಯೇ" ಎಂದು ಕೃಷ್ಣನು ಹೇಳಿರುವುದು ಸ್ವಾರಸ್ಯಪೂರ್ಣವಾಗಿದೆ.

**ಈ ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿರಿ** **1 × 4 = 4**

39. ನೀಲ ಮೇಘ ಮಂಡಲ ಸಮಬಣ್ಣ
ಮುಗಿಲಿಗೆ ರೆಕ್ಕೆಗಳೊಡೆದವೊ ಅಣ್ಣಾ
ಚಿಕ್ಕೆಯ ಮಾಲೆಯ ಸೆಕ್ಕಿಸಿಕೊಂಡು
ಸೂರ್ಯ–ಚಂದ್ರರನು ಮಾಡಿದೆ ಕಣ್ಣಾ
ಹಕ್ಕಿ ಹಾರುತಿದೆ ನೋಡಿದಿರಾ?

**ಅಥವಾ**

ಯುಗ–ಯುಗಗಳ ಹಣೆ ಬರೆಹವ ಒರೆಸಿ
ಮನ್ವಂತರಗಳ ಭಾಗ್ಯವ ತೆರೆಸಿ
ರೆಕ್ಕೆಯ ಬೀಸುತ ಚೇತನಗೊಳಿಸಿ
ಹೊಸಗಾಲದ ಹಸುಮಕ್ಕಳ ಹರಸಿ
ಹಕ್ಕಿ ಹಾರುತಿದೆ ನೋಡಿದಿರಾ?

**ಈ ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು, ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ.1 × 4 = 4**

40. ಕೊಡಲಿ ಕೋರೆ ಕುಡ ಕಬ್ಬಿಣ ಮೊಸರು ಬೆಣ್ಣಿ ಹಾಲಾ
ಉಪ್ಪು ಎಣ್ಣೆ ಅರಿಸಿಣ ಜೀರಗಿ ಅಕ್ಕಿಸಕ್ಕಾರಿ ಬೆಲ್ಲಾ
ಗಂಗಳ ಚೆರಗಿ ಮಂಗಳ ಸೂತ್ರ ಹೋದವು ಬೀಸುಕಲ್ಲಾ
ಹಾಳಾಗಿ ಹೋಯಿತು ಅತ್ತು ವರ್ಣಿಸಿ ಹೇಳಲಿ ನಾನೆಷ್ಟಾ

ಉ: ಈ ಪದ್ಯಭಾಗವನ್ನು ಬಿ.ಎಸ್.ಗದ್ದಗೀಮಠರವರು ಸಂಪಾದಿಸಿರುವ ಜನಪದ ಗೀತೆಗಳು ಕೃತಿಯಿಂದ ಆರಿಸಿರುವ ಹಲಗಲಿ ಬೇಡರು ಪದ್ಯದಿಂದ ತೆಗೆದುಕೊಳ್ಳಲಾಗಿದೆ.

ಹಲಗಲಿಯ ಮೇಲೆ ಬ್ರಿಟಿಷ್ ದಂಡು ದಾಳಿ ಮಾಡಿ ಊರನ್ನು ಲೂಟಿ ಮಾಡಿದ ಬಗೆಯನ್ನು ಈ ಪದ್ಯವು ವಿವರಿಸುತ್ತದೆ. ಕೊಡಲಿ, ಕುಡಗೋಲು, ಕುಡ, ಕಬ್ಬಿಣ, ಮೊಸರು, ಬೆಣ್ಣೆ, ಹಾಲು, ಉಪ್ಪು, ಎಣ್ಣೆ ಅರಿಸಿಣ, ಜೀರಿಗೆ, ಅಕ್ಕಿ, ಸಕ್ಕರೆ, ಬೆಲ್ಲ, ಗಂಗಳ, ತಂಬಿಗೆ, ಮಂಗಳಸೂತ್ರ, ಬೀಸುವ ಕಲ್ಲು ಹೀಗೆ ಹಲಗಲಿಯ ಊರಿನಲ್ಲಿದ್ದ ಎಲ್ಲವನ್ನೂ ಬ್ರಿಟಿಷ್ ಸೈನಿಕರು ಲೂಟಿ ಮಾಡಿದರು. ಇದನ್ನು ಎಷ್ಟೆಂದು ವರ್ಣಿಸಿ ಹೇಳಲಿ, ಇಡೀ ಊರೇ ಹಾಳಾಗಿ ಹೋಯಿತು ಎಂದು ಕವಿ ವರ್ಣಿಸಿದ್ದಾರೆ. ಬ್ರಿಟಿಷರು ಭಾರತೀಯರ ಮೇಲೆ ಮಾಡುತ್ತಿದ್ದ ದೌರ್ಜನ್ಯದ ವಿರುದ್ಧ ಸ್ವಾತಂತ್ರ್ಯಕ್ಕಾಗಿ ಹೋರಾಡುವುದೇ ಲೇಸೆಂಬ ಮೌಲ್ಯವನ್ನು ಈ ಪದ್ಯ ಒಳಗೊಂಡಿದೆ.

**ಈ ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ.** **2 × 4 = 8**

41. ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಮೈಸೂರು 'ಮಾದರಿ ಮೈಸೂರು ರಾಜ್ಯ' ಹೇಗಾಯಿತು?

ಉ: 1902ರ ಆಗಸ್ಟ್ 8ನೇ ತಾರೀಖಿನಿಂದ ಮೈಸೂರು ರಾಜ್ಯದ ನೇರ ಉಸ್ತುವಾರಿ ಕೃಷ್ಣರಾಜ ಒಡೆಯರ ಸುಪರ್ದಿಗೆ ಬಂದಿತು. ಆಗ ದಿವಾನರಾಗಿದ್ದ ಸರ್. ಕೆ. ಶೇಷಾದ್ರಿ ಅಯ್ಯರ್‌ರವರ ಸಹಕಾರದೊಡನೆ ಮೈಸೂರು ರಾಜ್ಯದ ಸರ್ವೋತೋಮುಖ ಅಭಿವೃದ್ಧಿಗೆ ನಾಲ್ವಡಿ ಕೃಷ್ಣರಾಜ ಒಡೆಯರು ಕಂಕಣಬದ್ಧರಾದರು. ಇವರ ಕಾಲದಲ್ಲಿ ಇಡೀ ಭರತ ಖಂಡದಲ್ಲಿ ಯಾವ ಸಂಸ್ಥಾನವೂ ಕಾಣದ ಅಭಿವೃದ್ಧಿಯನ್ನು ಮೈಸೂರು ರಾಜ್ಯವು ಕಂಡುದರಿಂದ, ಮೈಸೂರು ಸಂಸ್ಥಾನಕ್ಕೆ 'ಮಾದರಿ ಮೈಸೂರು' ಎಂಬ ಕೀರ್ತಿ ಪ್ರಾಪ್ತವಾಯಿತು. ನಾಲ್ವಡಿ ಕೃಷ್ಣರಾಜ ಒಡೆಯರು ಅರಸು ಮನೆತನದಿಂದ ಬಂದವರಾಗಿದ್ದರೂ ಸಹ, ಜನತೆ ಆಡಳಿತದಲ್ಲಿ ಪಾಲ್ಗೊಳ್ಳುವಿಕೆಯ ಪರವಾಗಿದ್ದರು.

**ಅಥವಾ**

ಶಿಕ್ಷಣ ಕ್ಷೇತ್ರಕ್ಕೆ ವಿಶ್ವೇಶ್ವರಯ್ಯ ಅವರು ಸಲ್ಲಿಸಿದ ಕೊಡುಗೆಯನ್ನು ತಿಳಿಸಿ.

ಉ: ವಿಶ್ವೇಶ್ವರಯ್ಯ ಅವರು ಆಧುನಿಕ ಶಿಕ್ಷಣವೇ ಎಲ್ಲ ಸಮಸ್ಯೆಗಳಿಗೂ ಪರಮೋಚ್ಚ ಪರಿಹಾರವೆಂದು ನಂಬಿದ್ದರು. ಕ್ರಿ.ಶ. 1913 ರಲ್ಲಿ ಪ್ರಾಥಮಿಕ ಶಿಕ್ಷಣ ನಿಬಂಧನೆಯನ್ನು ಜಾರಿಗೆ ತಂದರು. ಮದ್ರಾಸ್ ವಿಶ್ವವಿದ್ಯಾನಿಲಯದ ನಿಯಂತ್ರಣಕ್ಕೆ ಒಳಪಟ್ಟಿದ್ದ ಪ್ರೌಢಶಿಕ್ಷಣ ಶಾಲೆಗಳನ್ನು ಬದಲಿಸಿ ಸಂಸ್ಥಾನವೇ ಪ್ರತ್ಯೇಕವಾದ ಪ್ರೌಢಶಿಕ್ಷಣದ ಅಂತಿಮ ಪರೀಕ್ಷೆ ನಡೆಸುವ ಯೋಜನೆಯನ್ನು ಆರ್ಥಿಕ ಪರಿಷತ್ತಿನ ಮೂಲಕ ಜಾರಿಗೆ ತಂದರು. ಮೈಸೂರು ವಿಶ್ವವಿದ್ಯಾನಿಲಯದ ಸ್ಥಾಪಿಸಿದರು. "ಶಿಕ್ಷಣಕ್ಕಾಗಿ ಶಿಕ್ಷಣವಿರಬೇಕು. ಅದು ಕೆಲವೇ ಜನರ ಸ್ವತ್ತಾಗದೆ ಪ್ರಗತಿಪರ ರಾಜ್ಯದಲ್ಲಿ ಎಲ್ಲರ ಆಜನ್ಮಸಿದ್ಧ ಹಕ್ಕಾಗಬೇಕು" ಎಂಬುದನ್ನು ಮನಗಂಡ ಇವರು ತಾಂತ್ರಿಕ ಮತ್ತು ವೃತ್ತಿಪರ ಶಿಕ್ಷಣಕ್ಕೆ ಆದ್ಯತೆ ನೀಡಿದರು. ಬೆಂಗಳೂರಿನಲ್ಲಿ ಮೆಕಾನಿಕಲ್ ಎಂಜಿನಿಯರಿಂಗ್ ಶಾಲೆ, ಮೈಸೂರಿನಲ್ಲಿ ಚಾಮರಾಜೇಂದ್ರ ತಾಂತ್ರಿಕ ಸಂಸ್ಥೆಗಳನ್ನು ಪ್ರಾರಂಭಿಸಿದರು. ಮಹಿಳಾ ಶಿಕ್ಷಣದ ಬಗ್ಗೆ ಸಹಾನುಭೂತಿ ಹೊಂದಿದ್ದ ಇವರು ಗೃಹಶಿಕ್ಷಣ ಶಾಲೆಗಳನ್ನು ಸ್ಥಾಪಿಸಿದರು. ವಿದ್ಯಾರ್ಥಿ ವೇತನವನ್ನು ಕೊಡುವ ಮೂಲಕ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ವ್ಯಾಸಂಗಕ್ಕೆ ಅನುವು ಮಾಡಿಕೊಟ್ಟರು.

42. ನಾವು ಯಾವ ಸಂಕಲ್ಪ ಕೈಗೊಳ್ಳಬೇಕೆಂಬುದು ಕವಿ ಶಿವರುದ್ರಪ್ಪನವರ ಆಶಯ?

"ನಮ್ಮ ಸುತ್ತಲೂ ಹಬ್ಬಿರುವ ದ್ವೇಷದ ಕತ್ತಲೆಯನ್ನು ಕಳೆಯಲು, ಪ್ರೀತಿಯ ದೀಪವನ್ನು ಹಚ್ಚುವ, ಸಂಸಾರ ಸಾಗರದಲ್ಲಿ ಬಿರುಗಾಳಿಗೆ ಸಿಲುಕಿ ಹೊಯ್ದಾಡುತ್ತಿರುವ ಬದುಕೆಂಬ ಹಡಗನ್ನು ಎಚ್ಚರದಲ್ಲಿ ಮುನ್ನಡೆಸುವ, ಪರಿಸರ ಮಾಲಿನ್ಯದಿಂದ ಕಲುಷಿತವಾಗಿರುವ ನದೀಜಲಗಳಿಗೆ ಶುದ್ಧೀಕರಿಸುವ ಮುಂಗಾರಿನ ಮಳೆಯಂತಹ ಪರಿಸರ ಪ್ರೇಮಿಯಾಗುವ, ಬರಡಾಗಿರುವ ಕಾಡುಮೇಡುಗಳು ಹಚ್ಚಹಸಿರಿನಿಂದ ಕಂಗೊಳಿಸಿ, ಸಮೃದ್ಧವಾಗುವಂತಹ ವಸಂತಕಾಲವಾಗುವ, ಅತ್ಯಾಚಾರ, ಅನಾಚಾರ, ಭ್ರಷ್ಟಾಚಾರ, ಅಸ್ಪೃಶ್ಯತೆ, ಅಸಮಾನತೆಗಳಿಂದ ಅಧಃಪತನಗೊಂಡಿರುವ ಸಮಾಜವನ್ನು ಹೊಸ ಭರವಸೆಗಳ ಮೂಲಕ ಮೇಲೆತ್ತುವ, ಭಾಷೆ, ಜಾತಿ, ಮತ, ಧರ್ಮಗಳ ಭೇದಭಾವದಿಂದ ಮನುಜ ಮನುಜರ ನಡುವೆ ಉಂಟಾಗಿರುವ ಅಸಮಾನತೆಯ ಅಡ್ಡಗೋಡೆಗಳನ್ನು ಕೆಡಹಿ, ಸಮಾನತೆಯ ಮನೋಭಾವನೆಯನ್ನು ಮೂಡಿಸುವ ಸೇತುವೆಯಾಗುವ, ಎಲ್ಲ ಮತಗಳು ಸಾಧನೆಯ ದಾರಿಗಳು ಎಂಬ ಎಚ್ಚರದಲ್ಲಿ ಬದುಕುವ, ಭಯ ಹಾಗೂ ಸಂಶಯಗಳಿಂದ ಮಸುಕಾದ ಕಣ್ಣುಗಳಲ್ಲಿ ಭವಿಷ್ಯದ ಹೊಂಗನಸು ಕಾಣುವಂತೆ ಮಾಡುವ ದೃಢಸಂಕಲ್ಪವನ್ನು ಕೈಗೊಳ್ಳಬೇಕು" ಎಂಬುದು ಕವಿ ಜಿ.ಎಸ್. ಶಿವರುದ್ರಪ್ಪ ಅವರ ಆಶಯವಾಗಿದೆ.

**ಅಥವಾ**

ಸಂಕಲ್ಪ ಮತ್ತು ಅನುಷ್ಠಾನದ ಕುರಿತು ಕವಿ ಶಿವರುದ್ರಪ್ಪನವರ ಅಭಿಪ್ರಾಯವನ್ನು ವಿವರಿಸಿ.

ನಾವು ಜೀವನದಲ್ಲಿ ಪ್ರೀತಿಯ ದೀಪವನ್ನು ಹಚ್ಚುವ ಸಂಕಲ್ಪ ಕೈಗೊಳ್ಳುವುದರಿಂದ ದ್ವೇಷರಹಿತ ಸಮಾಜ ನಿರ್ಮಾಣ ಮಾಡಬಹುದು.ನಾವು ಬದುಕಿನಲ್ಲಿ ಎಚ್ಚರಿಕೆಯಿಂದ ಮುನ್ನಡೆಯುವ ಸಂಕಲ್ಪ ಕೈಗೊಳ್ಳುವುದರಿಂದ ಎಂತಹ ಸವಾಲುಗಳನ್ನು ಧೈರ್ಯವಾಗಿ ಎದುರಿಸಬಹುದು.ನಾವು ಮುಂಗಾರಿನ ಮಳೆಯಂತೆ ಪರಿಸರ ಸಂರಕ್ಷಿಸುವ ಸಂಕಲ್ಪ ಕೈಗೊಳ್ಳುವುದರಿಂದ ನದೀಜಲಗಳನ್ನು ಶುದ್ಧವಾಗಿ ಇಟ್ಟುಕೊಳ್ಳಬಹುದು.ನಾವು ವನಸಂರಕ್ಷಣೆಯ ಸಂಕಲ್ಪ ಕೈಗೊಳ್ಳುವುದರಿಂದ ಕಾಡುಗಳು ಹಚ್ಚಹಸುರಿನಿಂದ ಸಂವೃದ್ಧವಾಗುವಂತೆ ಮಾಡಬಹುದು.ನಾವು ಹೊಸ ಭರವಸೆಯನ್ನು ಮೂಡಿಸುವ ಸಂಕಲ್ಪ ಕೈಗೊಳ್ಳುವುದರಿಂದ ಸಮಾಜದ ನೈತಿಕ ಅಧಃಪತನವನ್ನು ತಡೆಯಬಹುದು.ನಾವು ಸಮಾನತೆ ಮನೋಭಾವನೆಯುಳ್ಳವರಾಗುವ ಸಂಕಲ್ಪ ಕೈಗೊಳ್ಳುವುದರಿಂದ ಮನುಜ ಮನುಜರ ನಡುವಿನ ಅಸಮಾನತೆಯ ಅಡ್ಡಗೋಡೆಗಳನ್ನು ಕೆಡುಹಬಹುದು.ಎಲ್ಲ ಮತಗಳು ಸಾಧನೆಯ ದಾರಿಗಳು ಎಂಬ ಎಚ್ಚರದಲ್ಲಿ ಬದುಕುವ ಸಂಕಲ್ಪ ಕೈಗೊಳ್ಳುವುದರಿಂದ ದೇಶದಲ್ಲಿ ಶಾಂತಿಯು ನೆಲೆಸುವಂತೆ ಮಾಡಬಹುದು.ಭಯ ಹಾಗೂ ಸಂಶಯಗಳಿಂದ ಮುಕ್ತರಾಗುವ

ಸಂಕಲ್ಪ ಕೈಗೊಳ್ಳುವುದರಿಂದ ಭವಿಷ್ಯದ ಹೊಂಗನಸನ್ನು ಕಾಣಬಹುದು. ಹೀಗೆ ಕವಿ ಶ್ರೀ ಜಿ.ಎಸ್.ಶಿವರುದ್ರಪ್ಪನವರು ಸಂಕಲ್ಪ ಮತ್ತು ಅನುಷ್ಠಾನವನ್ನು ಕುರಿತು ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸುತ್ತಾರೆ.

**ಈ ಕೆಳಗಿನ ಗದ್ಯಭಾಗವನ್ನು ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ.** 4 = (2+2)

43. ನಮ್ಮ ಸುತ್ತ ಮುತ್ತ ಇರುವ ಬೆಟ್ಟ–ಗುಡ್ಡಗಳು, ಮರಗಿಡಗಳು, ನಾವಿರುವ ಭೂಮಿ, ಸಾಗರ–ಸರೋವರಗಳು, ಹಳ್ಳಕೊಳ್ಳಗಳು, ಪಶುಪಕ್ಷಿಗಳು ಅರಣ್ಯ, ಗಾಳಿ, ಆಕಾಶ ಇವೆಲ್ಲವೂ ಸೇರಿ ಪರಿಸರವೆನಿಸಿದೆ. ಈ ಪರಿಸರವನ್ನೇ ಪ್ರಕೃತಿ ಅಥವಾ ನಿಸರ್ಗವೆಂದು ಕರೆಯುತ್ತಾರೆ. ಪರಿಸರವನ್ನು ಮುಖ್ಯವಾಗಿ ಪ್ರಾಕೃತಿಕ ಪರಿಸರ ಮತ್ತು ಮಾನವ ನಿರ್ಮಿತ ಪರಿಸರವೆಂದು ವಿಭಾಗಿಸುತ್ತೇವೆ. ನದಿ, ಸಮುದ್ರ, ಸರೋವರ, ಅರಣ್ಯ, ಬೆಟ್ಟ–ಗುಡ್ಡ, ಪರ್ವತ ಮುಂತಾದವುಗಳು ಪ್ರಾಕೃತಿಕ ಪರಿಸರವಾದರೆ, ಕಟ್ಟಡಗಳು, ಕೃಷಿಭೂಮಿ, ಕೈಗಾರಿಕೆಗಳು, ನಗರಗಳು, ಅಣೆಕಟ್ಟುಗಳು, ಕಾಲುವೆ, ರಸ್ತೆಗಳು ಮಾನವ ನಿರ್ಮಿತ ಪರಿಸರವಾಗಿದೆ. ಪರಿಸರವನ್ನು ಬಿಟ್ಟು ಮನುಷ್ಯ ಜೀವನ ಸಾಧ್ಯವೇ ಇಲ್ಲ. ಆದರೆ ಇಂದು ಮನುಷ್ಯ ತನ್ನ ಸ್ವಾರ್ಥ ಸುಖಕ್ಕಾಗಿ ಪರಿಸರವನ್ನು ದುರ್ಬಳಕೆ ಮಾಡುತ್ತಿದ್ದಾನೆ. ಪರಿಸರವನ್ನು ಹಾಳು ಮಾಡುತ್ತಿದ್ದಾನೆ. ಇದರಿಂದಾಗಿ, ಅತಿವೃಷ್ಟಿ, ಅನಾವೃಷ್ಟಿ, ಹವಾಮಾನದ ಏರುಪೇರುಗಳು ಸಂಭವಿಸಿ, ಸುನಾಮಿ, ಪ್ರವಾಹ, ಚಂಡಮಾರುತ, ಭೂಕಂಪ ಮೊದಲಾದ ಪ್ರಕೃತಿ ವಿಕೋಪಗಳು ಉಂಟಾಗುತ್ತಿವೆ.

ಪ್ರಶ್ನೆಗಳು:

ಅ) ಪ್ರಕೃತಿ ವಿಕೋಪಗಳು ಉಂಟಾಗಲು ಕಾರಣಗಳೇನು?

ಉ: ಪರಿಸರವನ್ನು ಬಿಟ್ಟು ಮನುಷ್ಯ ಜೀವನ ಸಾಧ್ಯವೇ ಇಲ್ಲ. ಆದರೆ ಇಂದು ಮನುಷ್ಯ ತನ್ನ ಸ್ವಾರ್ಥ ಸುಖಕ್ಕಾಗಿ ಪರಿಸರವನ್ನು ದುರ್ಬಳಕೆ ಮಾಡುತ್ತಿದ್ದಾನೆ. ಪರಿಸರವನ್ನು ಹಾಳು ಮಾಡುತ್ತಿದ್ದಾನೆ. ಇದರಿಂದಾಗಿ, ಅತಿವೃಷ್ಟಿ, ಅನಾವೃಷ್ಟಿ, ಹವಾಮಾನದ ಏರುಪೇರುಗಳು ಸಂಭವಿಸಿ, ಸುನಾಮಿ, ಪ್ರವಾಹ, ಚಂಡಮಾರುತ, ಭೂಕಂಪ ಮೊದಲಾದ ಪ್ರಕೃತಿ ವಿಕೋಪಗಳು ಉಂಟಾಗುತ್ತಿವೆ.

ಆ) ಪ್ರಕೃತಿ ಎಂದರೇನು? ಅದರ ಬಗೆಗಳಾವುವು?

ಉ: ನಮ್ಮ ಸುತ್ತ ಮುತ್ತ ಇರುವ ಬೆಟ್ಟ–ಗುಡ್ಡಗಳು, ಮರಗಿಡಗಳು, ನಾವಿರುವ ಭೂಮಿ, ಸಾಗರ–ಸರೋವರಗಳು, ಹಳ್ಳಕೊಳ್ಳಗಳು, ಪಶುಪಕ್ಷಿಗಳು ಅರಣ್ಯ, ಗಾಳಿ, ಆಕಾಶ ಇವೆಲ್ಲವೂ ಸೇರಿ ಪರಿಸರವೆನಿಸಿದೆ. ಈ ಪರಿಸರವನ್ನೇ ಪ್ರಕೃತಿ ಅಥವಾ ನಿಸರ್ಗವೆಂದು ಕರೆಯುತ್ತಾರೆ. ಪರಿಸರವನ್ನು ಮುಖ್ಯವಾಗಿ ಪ್ರಾಕೃತಿಕ ಪರಿಸರ ಮತ್ತು ಮಾನವ ನಿರ್ಮಿತ ಪರಿಸರವೆಂದು ವಿಭಾಗಿಸುತ್ತೇವೆ.

44. ನಿಮ್ಮನ್ನು ಸರ್ಕಾರಿ ಪ್ರೌಢಶಾಲೆ, ಬೀದರ್‌ನ ಮೋಹನ್/ಮೋನಿಕಾ ಎಂಬ ವಿದ್ಯಾರ್ಥಿ ಎಂದು ಭಾವಿಸಿಕೊಂಡು ನಿನ್ನ ಅರ್ಧ ವಾರ್ಷಿಕ ಪರೀಕ್ಷೆ ಸಿದ್ಧತೆ ಕುರಿತು ಚಾಮರಾಜನಗರದಲ್ಲಿರುವ ನಿಮ್ಮ ತಾಯಿಯವರಿಗೆ ಒಂದು ಪತ್ರ ಬರೆಯಿರಿ.

1 × 5 = 5

**ಅಥವಾ**

45. ನಿಮ್ಮನ್ನು ಶಿವಮೊಗ್ಗದ ಮೊರಾರ್ಜಿ ಪ್ರೌಢಶಾಲೆಯ ವಿಜಯ ಎಂಬ ವಿದ್ಯಾರ್ಥಿ ಎಂದು ಭಾವಿಸಿಕೊಂಡು ನಿಮ್ಮ ಶಾಲೆಯಲ್ಲಿ ನಡೆದ ಪ್ರತಿಭಾ ಕಾರಂಜಿ ಕಾರ್ಯಕ್ರಮವನ್ನು ಕುರಿತು ವಿಜಯ ಕರ್ನಾಟಕ ಪತ್ರಿಕೆಯ ಸಂಪಾದಕರಿಗೆ ಒಂದು ಪತ್ರ ಬರೆಯಿರಿ.

| | |
|---|---|
| ಇಂದ ವಿಳಾಸ, ದಿನಾಂಕ, ಸಂಬೋಧನೆ, ಕ್ಷೇಮ ವಿಚಾರ : | : 1 ಅಂಕ |
| ಪತ್ರದ ಒಡಲು – ವಿಷಯ ನಿರೂಪಣೆ | : 2 ಅಂಕ |
| ಮುಕ್ತಾಯ, ಇಂತಿ ಸಂಬೋಧನೆ, ಸಹಿ, ಹೊರ ವಿಳಾಸ | : 1 ಅಂಕ |
| ಭಾಷಾ ಶೈಲಿ, ಪದಬಂಧ, ವಿನ್ಯಾಸ | : 1 ಅಂಕ |
| ಒಟ್ಟು | : 5 ಅಂಕಗಳು |

46. **ಈ ಕೆಳಗಿನ ವಿಷಯಗಳಲ್ಲಿ ಯಾವುದಾದರೂ ಒಂದನ್ನು ಕುರಿತು ಹದಿನೈದು ವಾಕ್ಯಗಳಿಗೆ ಕಡಿಮೆಯಿಲ್ಲದಂತೆ ಪ್ರಬಂಧ ಬರೆಯಿರಿ.** 1 × 5 = 5

* ಮಹಿಳಾ ಸಬಲೀಕರಣ

**ಅಥವಾ**

* ಪ್ರವಾಹ ಕಾರಣಗಳು ಮತ್ತು ಪರಿಹಾರಗಳು

ಪ್ರಸ್ತಾವನೆ / ಪೀಠಿಕೆ / ವಿಷಯ ಪ್ರವೇಶ : 1 ಅಂಕ

ಒಡಲು / ಸಮರ್ಥ ವಿವರಣೆಯೊಂದಿಗೆ ವಿಷಯ ನಿರೂಪಣೆ: 2 ಅಂಕ
ಉಪಸಂಹಾರ / ಮುಕ್ತಾಯ / ವಿಷಯ ಸಮಾಪ್ತಿ : 1 ಅಂಕ
ಭಾಷಾ ಶೈಲಿ, ಪದಬಂಧ : 1 ಅಂಕ
ಒಟ್ಟು : 5 ಅಂಕಗಳು

****************